## ಜೆಎಸ್‌ಎಸ್ ಮಹಾವಿದ್ಯಾಪೀಠ
## ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿ, ಮೈಸೂರು

# ಶಿವಾನುಭವ ದಾಸೋಹ – 313

**25 ಮೇ 2024 * ಶನಿವಾರ * ಸಂಜೆ 6.00**

**ಸ್ಥಳ : ಶ್ರೀ ಶಿವರಾತ್ರಿ ರಾಜೇಂದ್ರ ಭವನ, ಜೆಎಸ್‌ಎಸ್ ಆಸ್ಪತ್ರೆ ಆವರಣ, ಮೈಸೂರು**

---

**ದಿವ್ಯ ಆಶೀರ್ವಾದ**

**ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು**

ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠ, ಶ್ರೀ ಸುತ್ತೂರು ಕ್ಷೇತ್ರ

**ಅಧ್ಯಕ್ಷತೆ**

**ಶ್ರೀಮತಿ ಎಂ.ಎ. ನೀಲಾಂಬಿಕಾ**

ನಿವೃತ್ತ ಉಪನ್ಯಾಸಕರು ಮತ್ತು ಅಧ್ಯಕ್ಷರು, ಶಿವರಾತ್ರೀಶ್ವರ ಅಕ್ಕನ ಬಳಗ, ಮೈಸೂರು

**ಉಪನ್ಯಾಸ**

**ಡಾ. ಬಿ.ಎಸ್. ಸುದೀಪ್**

ಸಹಾಯಕ ಪ್ರಾಧ್ಯಾಪಕರು, ಜೆಎಸ್‌ಎಸ್ ಕಾಲೇಜು, ಮೈಸೂರು

**ವಿಷಯ : ಅಕ್ಕಮಹಾದೇವಿಯ ವಚನಗಳಲ್ಲಿ ಅರಿವು**

**ವಚನ ಗಾಯನ**

**ಕು. ಎನ್. ಚೂಡಾಮಣಿ**

ಮೈಸೂರು

---

**ಪ್ರಾಯೋಜಕರು**

**ಶ್ರೀಮತಿ ಬಿ.ಪಿ. ಸುಶ್ಮಿತಾ ಮತ್ತು ಶ್ರೀ ಬಿ. ಮಹೇಶ್**

ಗುತ್ತಿಗೆದಾರರು

# 825, ಎರಡನೇ ಹಂತ, ಜೆಎಸ್‌ಎಸ್ ಲೇಔಟ್, ಮೈಸೂರು

**ತಮಗೆ ಆದರದ ಸ್ವಾಗತ**

ಸುತ್ತೂರು ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠದ 23ನೇ ಪೀಠಾಧಿಪತಿಗಳಾದ ಪರಮಪೂಜ್ಯ ಜಗದ್ಗುರು ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರು ಪ್ರಸಾದನಿಲಯಗಳು ಹಾಗೂ ಶಿಕ್ಷಣಸಂಸ್ಥೆಗಳನ್ನು ಸ್ಥಾಪಿಸುವ ಮೂಲಕ ಜನತೆಯ ಸರ್ವಾಂಗೀಣ ಉನ್ನತಿಗೆ ಕಾರಣರಾದರು. ಶಿಕ್ಷಣದ ಮೂಲಕವೇ ಸಾಮಾಜಿಕ ಅಭಿವೃದ್ಧಿ ಸಾಧ್ಯ ಎಂಬುದನ್ನು ಅವರು ಮನಗಂಡಿದ್ದರು. ಶ್ರೀಗಳವರು ಜಾತಿ, ಮತ, ಪಂಥ, ಧರ್ಮ ಭೇದವಿಲ್ಲದೆ ಅನ್ನದಾಸೋಹ, ಜ್ಞಾನದಾಸೋಹದ ಜೊತೆಗೆ ಜನತೆಯ ಸಮಗ್ರ ಅಭಿವೃದ್ಧಿಗಾಗಿ, ನೈತಿಕತೆ ಹಾಗೂ ಧಾರ್ಮಿಕತೆಗಳ ಪ್ರಸಾರಕ್ಕಾಗಿ, ಹಲವಾರು ದಶಕಗಳ ಹಿಂದೆಯೇ ಶರಣತತ್ತ್ವ ಪ್ರಸಾರ ಸಮಿತಿಯಂಥ ಸಂಸ್ಥೆಗಳ ಮೂಲಕ ಧರ್ಮದಾಸೋಹವನ್ನು ಪ್ರಾರಂಭಿಸಿದರು. 1986ರಲ್ಲಿ ಶರಣ ಸಾಹಿತ್ಯ ಪರಿಷತ್ತು ಹಾಗೂ ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿಯನ್ನು ಸ್ಥಾಪಿಸಿ ಆಧ್ಯಾತ್ಮಿಕ ಚಿಂತನೆಗೆ ಹೊಸ ಆಯಾಮವನ್ನು ನೀಡಿದರು.

ಈ ದತ್ತಿಯ ವತಿಯಿಂದ ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರ ದಿವ್ಯ ಸಾನ್ನಿಧ್ಯದಲ್ಲಿ ದಿನಾಂಕ 12.5.1996ರಂದು 'ಶಿವಾನುಭವ ದಾಸೋಹ' ಕಾರ್ಯಕ್ರಮವನ್ನು ಪ್ರಾರಂಭಿಸಲಾಯಿತು. ಅಂದಿನಿಂದಲೂ ಪ್ರತಿ ತಿಂಗಳ ಕೊನೆಯ ಶನಿವಾರದಂದು ಈ ಕಾರ್ಯಕ್ರಮವು ನಿರಂತರವಾಗಿ ನಡೆದುಕೊಂಡು ಬರುತ್ತಿದೆ. ಧರ್ಮ, ದರ್ಶನ, ವಚನಸಾಹಿತ್ಯ, ಧರ್ಮಗಳ ತೌಲನಿಕ ವಿವೇಚನೆ, ಜೀವನಕಲೆ ಮೊದಲಾದ ವಿಷಯಗಳನ್ನು ಕುರಿತು ಉಪನ್ಯಾಸ ಏರ್ಪಡಿಸಲಾಗುತ್ತಿದೆ.

**ಶ್ರೀಮತಿ ಎಂ.ಎ. ನೀಲಾಂಬಿಕಾರವರು** ಖ್ಯಾತ ನಾಟಕಕಾರರಾಗಿದ್ದ ಶ್ರೀ ಸಿ. ಅಂಕಪ್ಪನವರ ಸುಪುತ್ರಿ. ಜೆಎಸ್‌ಎಸ್ ಶಿಕ್ಷಣಸಂಸ್ಥೆಗಳಲ್ಲಿ ಶಿಕ್ಷಕರಾಗಿ ಮತ್ತು ಉಪನ್ಯಾಸಕರಾಗಿ ಸೇವೆ ಸಲ್ಲಿಸಿ ನಿವೃತ್ತರಾಗಿದ್ದಾರೆ. ಉತ್ತಮ ಪ್ರವಚನಕಾರರು, ಶರಣ ಸಾಹಿತ್ಯ ಸಂಸ್ಕೃತಿಯ ಬಗ್ಗೆ ಅಪಾರ ಅಭಿಮಾನವುಳ್ಳವರು. ನಲವತ್ತಕ್ಕೂ ಹೆಚ್ಚು ಶರಣ ಸಾಹಿತ್ಯದ ಕೃತಿಗಳನ್ನು ರಚಿಸಿದ್ದಾರೆ. ಮೈಸೂರು ಕದಳಿ ಮಹಿಳಾ ವೇದಿಕೆಯ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದಾರೆ. ಪ್ರಸ್ತುತ ಶ್ರೀ ಶಿವರಾತ್ರೀಶ್ವರ ಅಕ್ಕನ ಬಳಗದ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಶ್ರೀಮತಿ ಶಕುಂತಲ ಜಯದೇವ ಪ್ರಶಸ್ತಿ ಸೇರಿದಂತೆ ಹಲವಾರು ಪ್ರಶಸ್ತಿ, ಗೌರವಗಳಿಗೆ ಪಾತ್ರರಾಗಿದ್ದಾರೆ.

**ಡಾ. ಬಿ.ಎಸ್. ಸುದೀಪ್‌ರವರು** ಮಂಡ್ಯ ತಾಲ್ಲೂಕು ಬೇವುಕಲ್ಲು ಗ್ರಾಮದವರು. ಹಂಪಿ ಕನ್ನಡ ವಿಶ್ವವಿದ್ಯಾಲಯದಿಂದ ಕನ್ನಡ ವಿಷಯದಲ್ಲಿ ಸ್ನಾತಕೋತ್ತರ ಪದವಿ ಮತ್ತು ಪಿಎಚ್.ಡಿ ಪಡೆದಿರುವರು. ಮೈಸೂರು ಊಟಿ ರಸ್ತೆಯ ಜೆಎಸ್‌ಎಸ್ ಕಲಾ ವಾಣಿಜ್ಯ ಮತ್ತು ವಿಜ್ಞಾನ ಕಾಲೇಜಿನಲ್ಲಿ ಕನ್ನಡ ಸ್ನಾತಕೋತ್ತರ ವಿಭಾಗದ ಮುಖ್ಯಸ್ಥರು ಮತ್ತು ಸಹಾಯಕ ಪ್ರಾಧ್ಯಾಪಕರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಸಾಹಿತ್ಯದಲ್ಲಿ ಆಸಕ್ತರಾದ ಇವರು 'ಅನಕೃ ಕಾದಂಬರಿಗಳ ಸ್ತ್ರೀವಾದಿ ಅಧ್ಯಯನ', 'ಸತ್ಯ ಮಾರ್ಗದ ಸಂಶೋಧಕ ಡಾ. ಎಂ.ಎಂ. ಕಲಬುರ್ಗಿ', 'ಕನ್ನಡದ ಸ್ಫೂರ್ತಿ ಶಕ್ತಿ ಮಂತ್ರ ಅನಕೃ' ಕೃತಿಗಳನ್ನು ರಚಿಸಿದ್ದಾರೆ. ಸುಮಾರು ಹದಿನೈದಕ್ಕೂ ಹೆಚ್ಚು ಸಂಶೋಧನಾ ಲೇಖನಗಳನ್ನು ಪ್ರಕಟಿಸಿದ್ದಾರೆ.

**ಶ್ರೀ ಬಿ. ಮಹೇಶ್‌ರವರು** ಚಾಮರಾಜನಗರ ಜಿಲ್ಲೆ ಯಳಂದೂರು ತಾಲ್ಲೂಕು ಬೂದಿತಿಟ್ಟು ಗ್ರಾಮದವರು. ಸಿವಿಲ್ ವಿಷಯದಲ್ಲಿ ಡಿಪ್ಲೋಮಾ ವ್ಯಾಸಂಗ ಮಾಡಿರುತ್ತಾರೆ. ವೃತ್ತಿಯಲ್ಲಿ ಗುತ್ತಿಗೆದಾರರು. ಧರ್ಮಪತ್ನಿ ಶ್ರೀಮತಿ ಬಿ.ಪಿ ಸುಶ್ಮಿತಾರವರು ಗೃಹಿಣಿ. ಪುತ್ರಿ ಕು. ಮಾನ್ವಿತ ಎಂ. ಪಟೇಲ್, ಬಿ.ಇ. ಮತ್ತು ಪುತ್ರ ಕು. ಅಂಕೇಶ್ ಎಂ. ಪಟೇಲ್ ರವರು ಪಿಯುಸಿ ವ್ಯಾಸಂಗವನ್ನು ಮಾಡುತ್ತಿದ್ದಾರೆ.